ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:46:ಯುವ ನಿಧಿ 2023-24 ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:04.01.2024.

**ಸುತ್ತೋಲೆ**

**ವಿಷಯ:** 2022-23 ನೇ ಸಾಲಿನಲ್ಲಿ ಅನುಷ್ಠಾನಗೊಂಡಿರುವ "ಕರ್ನಾಟಕ ಯುವನಿಧಿ ಯೋಜನೆ" ಗಾಗಿ ಪದವಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು ನೊಂದಣಿ ಮಾಡಿಕೊಳ್ಳುವ ಬಗ್ಗೆ,

**ಉಲ್ಲೇಖ:** ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಆದೇಶ ಸಂಖ್ಯೆ:ಕೌಉಜೀಇ 55 ಕೈತಇ 2023, ದಿನಾಂಕ:03.06.2023.

***

ಸೂಚಿತ ವಿಷಯಕ್ಕೆ ಸಂಬಂದಿಸಿದಂತೆ ಉಲ್ಲೇಖಿತ ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಪತ್ರದಲ್ಲಿ ಸೂಚಿಸಿರುವಂತೆ ಕರ್ನಾಟಕ ಸರ್ಕಾರವು **"ಕರ್ನಾಟಕ ಯುವನಿಧಿ ಯೋಜನೆ"** ಯನ್ನು ಅನುಷ್ಠಾನಗೊಳಿಸಿರುತ್ತದೆ. ಇದರನ್ವಯ 2022-23 ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ತರಗತಿಯಲ್ಲಿ ತೇರ್ಗಡೆಯಾಗಿ, ತೇರ್ಗಡೆಯಾದ ದಿನಾಂಕದಿಂದ 180 ದಿನಗಳು ಉದ್ಯೋಗ ಲಭಿಸದ ಪದವೀಧರ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು **ರೂ.3000.00 (ಮೂರು ಸಾವಿರ ಮಾತ್ರ)** ನಿರುದ್ಯೋಗ ಭತ್ಯೆಯನ್ನು ಸರ್ಕಾರವು ಅನುಷ್ಠಾನಗೊಳಿಸಿದೆ. ಯುವನಿಧಿ ಮೊತ್ತವನ್ನ ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರ ವರ್ಗಾವಣೆ ಮೂಲಕ (ಡಿಬಿಟಿ) ವರ್ಗಾವಣೆ ಮಾಡಲಾಗುತ್ತದೆ.

ಸದರಿ ಯೋಜನೆಗೆ ಇಲಾಖೆ ವ್ಯಾಪ್ತಿಯ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು/ಪ್ಲೇಸ್ ಮೆಂಟ್ ಅಧಿಕಾರಿಗಳು/ಸಿಬ್ಬಂದಿಗಳು **2022-23 ನೇ ಸಾಲಿನಲ್ಲಿ ಪದವಿ ತರಗತಿ ತೇರ್ಗಡೆಯಾದ** ವಿದ್ಯಾರ್ಥಿಗಳ ಗಮನಕ್ಕಾಗಿ ನಿಯಮಾನುಸಾರ ಸದರಿ ಯೋಜನೆ ಬಗ್ಗೆ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಿ ಅರ್ಹ ಅಭ್ಯರ್ಥಿಗಳಿಗೆ ಅರಿವು ಮೂಡಿಸುವುದರೊಂದಿಗೆ ಸೂಕ್ತ ಮಾರ್ಗದರ್ಶನ ನೀಡಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಕರ್ನಾಟಕ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಇರುವ ಷರತ್ತು ಮತ್ತು ನಿಬಂಧನೆಗಳನ್ನು ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ನಮೂದಿಸಲಾಗಿದೆ (ಪ್ರತಿ ಲಗತ್ತಿಸಿದೆ). ಅರ್ಹ ಅಭ್ಯರ್ಥಿಗಳು ಈ ಕೆಳಗಿನ ಪೋರ್ಟಲ್/ಕಛೇರಿಗಳಲ್ಲಿ ಅರ್ಜಿ ಸಲ್ಲಿಸಬಹುದು.

1. https://sevasindhugs.karnataka.gov.in/
2. ಕರ್ನಾಟಕ- ಓನ್
3. ಬಾಪೂಜಿ ಸೇವಾ ಕೇಂದ್ರಗಳು
4. ಗ್ರಾಮ-ಓನ್ ಕೇಂದ್ರಗಳು.

ಕರ್ನಾಟಕ ಯುವನಿಧಿ ಯೋಜನೆಗೆ ಸಂಬಂದಿಸಿದಂತೆ ಹೆಚ್ಚಿನ ಮಾಹಿತಿಗಾಗಿ **ಸಹಾಯವಾಣಿ:18005999919** ಮತ್ತು **ಜಿಲ್ಲಾ ಉದ್ಯೋಗ ಅಧಿಕಾರಿಗಳನ್ನು** ಸಂಪರ್ಕಿಸುವುದು.

**(ಕರಡು ಪತ್ರ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.)**

ಕಾಲೇಜು ಶಿಕ್ಷಣ ನಿರ್ದೇಶಕರು.

ಇವರಿಗೆ.

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ,ಕಲಬುರಗಿ-ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಪ್ಲೇಸ್ ಮೆಂಟ್ ಅಧಿಕಾರಿಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು, ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ



**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ
ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ



**ಶ್ರೀ ಡಿ.ಕೆ. ಶಿವಕುಮಾರ್**
ಸನ್ಮಾನ್ಯ ಉಪಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

# ಯುವನಿಧಿ



**ಡಾ. ಶರಣ್ ಪ್ರಕಾಶ್ ಪಾಟೀಲ್**
ಮಾನ್ಯ ಸಚಿವರು, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ

**ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ**
**ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆ**

ಪ್ರತೀ ತಿಂಗಳು ನಿರುದ್ಯೋಗ ಭತ್ಯೆ

| ₹3000 | ₹1500 |
|---|---|
| ಪದವೀಧರರಿಗೆ | ಡಿಪ್ಲೋಮಾ ಪದವೀಧರರಿಗೆ |

## ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭ



## ಅರ್ಹತೆ:

1. 2023ರಲ್ಲಿ ಪದವಿ/ಡಿಪ್ಲೋಮಾ ಉತ್ತೀರ್ಣರಾದ ವಿದ್ಯಾರ್ಥಿಗಳು
2. ಪದವಿ/ಡಿಪ್ಲೋಮಾ ನಂತರ ಕನಿಷ್ಠ 6 ತಿಂಗಳ ಅವಧಿಯವರೆಗೆ ಸರ್ಕಾರಿ/ ಖಾಸಗಿ ಉದ್ಯೋಗ ಹೊಂದಿಲ್ಲದವರು
3. ಸ್ವಯಂ ಉದ್ಯೋಗ ಹೊಂದಿಲ್ಲದವರು
4. ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವವರು
5. ಕರ್ನಾಟಕದಲ್ಲಿ ವಾಸವಿರುವವರು (ಕನಿಷ್ಠ 6 ವರ್ಷಗಳವರೆಗೆ ಪದವಿ/ಡಿಪ್ಲೋಮಾದವರೆಗೆ ಅಧ್ಯಯನ ಮಾಡಿದವರು)
6. ನೋಂದಣಿಗೆ ಅಗತ್ಯವಿರುವ ದಾಖಲಾತಿಗಳು- ಎಸ್.ಎಸ್.ಎಲ್.ಸಿ., ಪಿಯುಸಿ, ಪದವಿ/ ಡಿಪ್ಲೋಮಾ ಪ್ರಮಾಣ ಪತ್ರ

ನೋಂದಾಯಿಸಿಕೊಳ್ಳಲು ಸೇವಾ ಸಿಂಧು ಪೋರ್ಟಲ್
**https://sevasindhugs.karnataka.gov.in** ಗೆ ಭೇಟಿ ನೀಡಿ.

**Helpline No.**
**1800 599 9918**

ಉಚಿತವಾಗಿ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಕೂಡ ಅರ್ಜಿ ಸಲ್ಲಿಸಬಹುದು.
ನೋಂದಣಿಯಲ್ಲಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆ, ಆಧಾರ್ ಕಾರ್ಡ್ ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ಸಂಖ್ಯೆಯ ವಿವರ ನೀಡಬೇಕು.

ಸೇವಾ ಸಿಂಧು ಪೋರ್ಟಲ್‌ನಲ್ಲಿ ಮಾಸಿಕವಾಗಿ ನಿರುದ್ಯೋಗ ದೃಢೀಕರಣವು ಕಡ್ಡಾಯ. ತಪ್ಪು ಮಾಹಿತಿ ನೀಡಿದ್ದಲ್ಲಿ ದಂಡ ವಿಧಿಸಲಾಗುವುದು.



**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ



**ಶ್ರೀ ಡಿ. ಕೆ. ಶಿವಕುಮಾರ್**
ಮಾನ್ಯ ಉಪಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

ಕೌಶಲ್ಯ ಕರ್ನಾಟಕ



**ಡಾ. ಶರಣ ಪ್ರಕಾಶ ಪಾಟೀಲ**
ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು,
ಕರ್ನಾಟಕ ಸರ್ಕಾರ



# ಯುವ ನಿಧಿ

**ರಾಜ್ಯದ ನಿರುದ್ಯೋಗಿ ಪದವೀಧರರಿಗೆ ನಿರುದ್ಯೋಗ ಭತ್ಯೆ ನೀಡುವ ಯೋಜನೆ**

## ಯಾರು ಅರ್ಹರು?

2023 ರಲ್ಲಿ ಪದವಿ/ಡಿಪ್ಲೊಮೋ ಪದವಿ ಪಡೆದು 6 ತಿಂಗಳಾದರೂ ಉದ್ಯೋಗ ಪಡೆಯದ ನಿರುದ್ಯೋಗಿ ಪದವೀಧರರು

## ಯಾರು ಅನರ್ಹರು?

ಸರ್ಕಾರಿ / ಸರ್ಕಾರಿ ಅನುದಾನಿತ ಸಂಸ್ಥೆ / ಖಾಸಗಿ ವಲಯದ ಉದ್ಯೋಗ ಹೊಂದಿರುವ ಅಭ್ಯರ್ಥಿಗಳು

ಸ್ವಯಂ ಉದ್ಯೋಗ ಹೊಂದಿರುವ ಅಭ್ಯರ್ಥಿಗಳು

ವಿದ್ಯಾಭ್ಯಾಸ ಮುಂದುವರೆಸಿರುವ ಅಭ್ಯರ್ಥಿಗಳು

**ಡಿಸೆಂಬರ್ 26 ರಿಂದ ಸೇವಾ ಸಿಂಧು ಪೋರ್ಟಲ್ ಮೂಲಕ ಈ ಯೋಜನೆಗೆ ಅರ್ಜಿ ಸಲ್ಲಿಸಬಹುದು**

